ಅರಣ್ಯ ಸಿಬ್ಬಂದಿಯೂ ಅಲ್ಲದೆ ಪೋಲೀಸ್ ಇಲಾಖೆಯ ಸಿಬ್ಬಂದಿಯವರು : ಐ.ಜಿ.ಯವರು ನೇತೃತ್ವದಲ್ಲಿ ಶ್ರೀಗಂಧ ಮತ್ತು ಅರಣ್ಯ ಉತ್ಪನ್ನಗಳ ಕಳ್ಳಸಾಗಾಣಿಕೆಯನ್ನು ತಡೆಗಟ್ಟಲು ಶ್ರಮಿಸುತ್ತಿದ್ದಾರೆ.

ವಿಷಯ : ಹೊಸ ಶಿಕ್ಷಣ ಪದ್ಧತಿ ಬಗ್ಗೆ.

1317

ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುನರೆ?

ಅ) ರಾಜ್ಯದಲ್ಲಿ ಹಾಲಿ ಜಾರಿಯಲ್ಲಿರುವ ಶಿಕ್ಷಣ ಪದ್ಧತಿಯನ್ನು ಬದಲಿಸಿ ಹೊಸ ರೂಪವನ್ನು ಕೊಡುವ ಯೋಜನೆ ಸರ್ಕಾರಕ್ಕೆ ಇದೆಯೇ?

ಡಾ॥ ಹೆಗ್ಗಪ್ಪ ಡಿ. ಲಮಾಣಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇದೆ.

ಪ್ರಾಥಮಿಕ ಮತ್ತು ಪ್ರೌಢ ಹಂತಗಳಲ್ಲಿನ ಪಠ್ಯವನ್ನು ಮತ್ತು ಪಠ್ಯ ಪುಸ್ತಕಗಳನ್ನು 1986ರ ರಾಷ್ಟ್ರೀಯ ಶಿಕ್ಷಣನೀತಿಗೆ ಅನುಗುಣವಾಗಿ ಪರಿಷ್ಕರಿಸಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ ರಾಷ್ಟ್ರೀಯ ಪ್ರಜ್ಞೆ, ವೈಜ್ಞಾನಿಕ ಮನೋಭಾವ ಪರಮತ ಸಹಿಷ್ಣುತೆ, ದೇಶಾಭಿಮಾನ ಮುಂತಾದ ಉದಾತ್ತ ಚಟುವಟಿಕೆಗಳನ್ನು ಬೆಳಿಸುವುದು, ಪರಿಷ್ಕೃತ ಪಠ್ಯವಸ್ತುವಿನ ಉದ್ದೇಶಗಳಾಗಿವೆ. ಸಾರ್ವತ್ರಿಕ ಸೌಲಭ್ಯ ಕಲ್ಪನೆ (ಯೂನಿವರ್ಸಲ್ ರಿಟನ್‌ಷನ್)ಸಾರ್ವತ್ರಿಕ ಸಾಧನೆ (ಯೂನಿವರ್ಸಲ್ ಅಚೀವ್‌ಮೆಂಟ್) ಇವು ಪ್ರಾಥಮಿಕ ಶಿಕ್ಷಣಕ್ಕೆ ಸಂಬಂಧಿಸಿದಂತೆ ಸರ್ಕಾರದ ಉದ್ದೇಶವಾಗಿದೆ. ಈ ಉದ್ದೇಶಗಳನ್ನು ಈಡೇರಿಸುವ ದಿಸೆಯಲ್ಲಿ ಅಗತ್ಯವಿರುವೆಡೆಯಲ್ಲಿ ಶಾಲೆಗಳ ಸ್ಥಾಪನೆ, ಶಾಲೆಗಳಿಗೆ ಕ್ರಮಬದ್ಧವಾಗಿ ವಿದ್ಯಾರ್ಥಿಗಳು ಹಾಜರಾಗಲು ಪ್ರೋತ್ಸಾಹಕಗಳಾದ ವಿದ್ಯಾ ವಿಕಾಸ, ಮಧ್ಯಾಹ್ನ ಉಪಹಾರ ಯೋಜನೆ ಮುಂತಾದ ಕಾರ್ಯಕ್ರಮಗಳ ಅನುಷ್ಠಾನ ಮತ್ತು ಶಾಲೆಗೆ ಬರುವ ಪ್ರತಿ ಮಗುವಿಗೂ ಕನಿಷ್ಠ ನಿಗಧಿತ ಕಲಿಕಾ ಹಂತವನ್ನು ತಲುಪುವಂತೆ ಮಾಡಲು ಕನಿಷ್ಠ ಕಲಿಕಾ ಹಂತಗಳನ್ನು ನಿಗಧಿಗೊಳಿಸುವುದು ಮುಂತಾದ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ.

ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೊಂದರಂತೆ ಕನ್ನಡ ಮಾದರಿ ಶಾಲೆಗಳನ್ನು ಸ್ಥಾಪಿಸಲಾಗಿದೆ. ಶೈಕ್ಷಣಿಕ ಪರಿಣಾಮಕಾರಿಯಾಗಿ ಭೋಧಿಸಲು ಶಿಕ್ಷಕರ ಸಾಮರ್ಥ್ಯವನ್ನು ಹೆಚ್ಚಿಸುವ ಸಲುವಾಗಿ ಕೇಂದ್ರದ ನೆರವಿನಿಂದ ರಾಜ್ಯದಲ್ಲಿ ಈಗಾಗಲೇ 8 ಜಿಲ್ಲಾ ಶಿಕ್ಷಕರ ತರಭೇತಿ ಕೇಂದ್ರಗಳು (ಡಿಐಇಟಿ) ಮತ್ತು ಪ್ರೌಢ ಶಾಲಾ ಶಿಕ್ಷಕರಿಗಾಗಿ 3 ಶಿಕ್ಷಕರ ತರಭೇತಿ ಸಂಸ್ಥೆಗಳನ್ನು (ಸಿಪಿಐ) ಸ್ಥಾಪಿಸಲಾಗಿದ್ದು, ಮುಂಬರುವ ವರ್ಷಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲೂ ಇಂತಹ ಸಂಸ್ಥೆಗಳನ್ನು ಸ್ಥಾಪಿಸಲಾಗುವುದು.

ಪ್ರಾಥಮಿಕ ಹಂತದ ಶಿಕ್ಷಣವನ್ನು ಮಕ್ಕಳಿಗೆ ಅವರ ಮಾತೃಭಾಷೆಯಲ್ಲೇ

ನೀಡಬೇಕೆಂಬ ನಿಲುವನ್ನು ಸರ್ಕಾರವು ಹೊಂದಿದೆ. ಈ ಉದ್ದೇಶ ಈಡೇರಿಕೆಗಾಗಿ ಒಂದರಿಂದ 4 ನೇ ತರಗತಿಯವರೆಗೆ ಶಾಲೆಗಳನ್ನು ಪ್ರಾರಂಭಿಸುವ ವಿಧಾನವನ್ನು ಉದಾರೀಕರಣಗೊಳಿಸಲಾಗಿದೆ. ಇದರನ್ವಯ ಆಂಗ್ಲ ಮಾಧ್ಯಮವನ್ನು ಹೊರತು ಪಡಿಸಿ ಉಳಿದ ಮಾಧ್ಯಮಗಳ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದ ಪೂರ್ವಾನುಮತಿ ಅಗತ್ಯ ಇರುವುದಿಲ್ಲ.

ಮಕ್ಕಳನ್ನು ಶಾಲೆಗಳಲ್ಲಿ ಉಳಿಯುವಂತೆ ಮಾಡುವ ಸಲುವಾಗಿ ಒಂದನೇ ತರಗತಿಯ ಭೋದನೆಗೆ ಒಬ್ಬ ಪ್ರತ್ಯೇಕ ಉಪಾಧ್ಯಾಯರನ್ನು ನೇಮಿಸಬೇಕೆಂಬ ಉದ್ದೇಶವನ್ನು ಸರ್ಕಾರ ಹೊಂದಿದೆ. ಶಾಲೆಗಳನ್ನು ಆಕರ್ಷಣೀಯವಾಗಿ ಮಾಡುವ ದೃಷ್ಟಿಯಿಂದ ಸುಸಜ್ಜಿತ ಶಾಲಾ ಕೊಠಡಿಗಳ ನಿರ್ಮಾಣ, ಆಟದ ಮೈದಾನ ಮಕ್ಕಳಿಗೆ ಪ್ರವಾಸ ಏರ್ಪಡಿಸುವಿಕೆ, ಅವರಲ್ಲಿ ಹುದುಗಿರುವ ಪ್ರತಿಭೆಯನ್ನು ವಿಕಸನಗೊಳಿಸಲು ಕಲಾ ಶಿಕ್ಷಣ ಭೋಧನೆ ಮುಂತಾದ ಕಾರ್ಯಕ್ರಮಗಳನ್ನು ಮುಂದಿನ ವರ್ಷದಿಂದ ಜಾರಿಗೊಳಿಸಲು ನಿರ್ಧರಿಸಲಾಗಿದೆ.

ಒಟ್ಟಾರೆ ಶಾಲೆಗೆ ಬರುವ ಪ್ರತಿ ಮಗುವೂ ನಿಗಧಿತ ಕಲಿಕೆಯನ್ನು ಪಡೆದು ಮುಂದಿನ ಸತ್ಪ್ರಜೆಯಾಗಲು ಅವಕಾಶ ಮಾಡಿಕೊಡುವಂತಹ ಶಿಕ್ಷಣವನ್ನು ಒದಗಿಸುವ ಗುರಿಯನ್ನು ಹೊಂದಲಾಗಿದೆ.

ಪ್ರೌಢ ಶಾಲಾ ಹಂತದಲ್ಲಿ ಶೈಕ್ಷಣಿಕ ಸೌಲಭ್ಯಗಳ ವಿಸ್ತರಣೆಗಿಂತ ಹಾಲಿ ಇರುವ ಶಾಲೆಗಳಿಗೆ ಭೌತಿಕ ಸೌಲಭ್ಯಗಳನ್ನು ಒದಗಿಸಿ ಅವುಗಳನ್ನು ಬಲಪಡಿಸುವ ಉದ್ದೇಶವನ್ನು ಹೊಂದಿದೆ.

ಶೈಕ್ಷಣಿಕ ತಂತ್ರಜ್ಞಾನ, ವಿಜ್ಞಾನ ಶಿಕ್ಷಣ ಉತ್ತಮಪಡಿಸುವಿಕೆ, ಮುಂತಾದ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ನೆರವಿನೊಂದಿಗೆ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ವಿಷಯ : ರಾಜ್ಯದ ಡೈರಿಗಳಲ್ಲಿ ನಿಗದಿಪಡಿಸಿರುವುದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿರುವ ಅಧಿಕಾರಿ ವರ್ಗ.

867

ಶ್ರೀ ಕೆ. ಹೆಚ್. ಹನುಮೇಗೌಡ (ಹಾಸನ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅನೇಕ ಡೈರಿಗಳಲ್ಲಿ ನಿಗಧಿಪಡಿಸಿರುವುದಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ಅಧಿಕಾರಿ ವರ್ಗದವರಿದ್ದು, ಸಂಬಂಧಿಸಿದ ಡೈರಿ ನಿರ್ದೇಶಕರು ಉತ್ತಮ ರೀತಿಯಲ್ಲಿ ನಡೆಯುತ್ತಿಲ್ಲವೆಂದು ಸಾರ್ವಜನಿಕರು ದೂರಿರುವುದು ನಿಜವೇ?

ಆ) ಈ ರೀತಿ ಡೈರಿಯ ಆಡಳಿತ ವರ್ಗದವರು ಮನಸೋಇಚ್ಛೆ ಅಧಿಕಾರಿಗಳನ್ನು ನೇಮಕ ಮಾಡಿಕೊಂಡಿರುವುದರಿಂದ ಡೈರಿಗಳು ನಷ್ಟದಲ್ಲಿ ನಡೆಯಲು ಕಾರಣವಾಗಿದೆ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಸದರಿ ಅನಾವಶ್ಯಕ ಹೆಚ್ಚಿನ ಸಂಖ್ಯೆಯಲ್ಲಿರುವ ಅಧಿಕಾರ ವರ್ಗವನ್ನು ಕಡಿಮೆಗೊಳಿಸಲು ಹಾಗೂ ಲಾಭದಾಯಕವಾಗಿ ನಡೆಸಲು ಸರ್ಕಾರವು ಕೈಗೊಂಡ ಕ್ರಮಗಳೇನು?